**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 91 ತಾಪಸ 2013 (ಭಾಗ-2)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 14.09.2015

## "ಅಧಿಕೃತ ಜ್ಞಾಪನ"

**ವಿಷಯ:** 2014-15 ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಲು ರಾಜ್ಯ ಮಟ್ಟದ ಪರಾಮರ್ಶೆ ಸಮಿತಿಯನ್ನು ರಚಿಸುವ ಬಗ್ಗೆ.

**ಉಲ್ಲೇಖ:** ಸಮಸಂಖ್ಯೆಯ ಸುತ್ತೋಲೆ, ದಿನಾಂಕ 22.07.2015

***

2014-15ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಗ್ರಾಮ ಪಂಚಾಯತಿಗಳು ಪಂಚತಂತ್ರ ತಂತ್ರಾಂಶದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದವು. ಅತಿ ಹೆಚ್ಚು ಅಂಕ ಗಳಿಸುವ ಮೂಲಕ 2014-15 ರ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅರ್ಹತೆ ಪಡೆದಿರುವ ಪ್ರತಿಯೊಂದು ತಾಲ್ಲೂಕಿಗೆ ಮೂರು ಗ್ರಾ.ಪಂ.ಗಳ ಹೆಸರುಗಳನ್ನು (ಮೂರನೇ ಸ್ಥಾನದ ನಂತರ ಇರುವ ಗ್ರಾಮ ಪಂಚಾಯತಿಗಳು, ಮೂರನೇ ಗ್ರಾ.ಪಂ. ಪಡೆದಷ್ಟೆ ಅಂಕಗಳನ್ನು ಪಡೆದಿದ್ದಲ್ಲಿ, ನಾಲ್ಕು ಅಥವಾ ಐದು ಗ್ರಾ.ಪಂ.ಗಳ ಹೆಸರುಗಳನ್ನು) ಕಳುಹಿಸಿ, ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ಪ್ರತಿ ತಾಲ್ಲೂಕಿಗೆ ಒಂದರಂತೆ ಆಯ್ಕೆ ಮಾಡಿ ಕಳುಹಿಸಲು ತಿಳಿಸಲಾಗಿತ್ತು. ಅದರನ್ವಯ, ಉಲ್ಲೇಖಿತ ಸುತ್ತೋಲೆಯಂತೆ, ಸ್ಥಳ ತನಿಖೆ/ದಾಖಲಾತಿ ಪರಿಶೀಲನೆ ನಡೆಸಿ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಯನ್ನು ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆ ಮಾಡಿ ಕಳುಹಿಸಿರುತ್ತಾರೆ.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಗ್ರಾಮ ಪಂಚಾಯತಿಗಳನ್ನು, ರಾಜ್ಯ ಮಟ್ಟದಲ್ಲಿ ಪರಾಮರ್ಶಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಕೆಳಕಂಡಂತೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಅಧಿಕಾರಿಗಳು | ಸಮಿತಿಯಲ್ಲಿನ ಪದನಾಮ |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ | ಅಧ್ಯಕ್ಷರು |
| 2 | ನಿರ್ದೇಶಕರು(ಪಂರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 3 | ನಿರ್ದೇಶಕರು(ಯೋಜನೆ, ಉಸ್ತುವಾರಿ ಮತ್ತು ಅನುಷ್ಠಾನ), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 4 | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ | ಸದಸ್ಯರು |
| 5 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ | ಸದಸ್ಯರು |
| 6 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತುಮಕೂರು ಜಿಲ್ಲಾ ಪಂಚಾಯತಿ | ಸದಸ್ಯರು |
| 7 | ಉಪ ಕಾರ್ಯದರ್ಶಿ(ಆ), ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ | ಸದಸ್ಯರು |
| 8 | ಉಪ ಕಾರ್ಯದರ್ಶಿ(ಆ), ರಾಮನಗರ ಜಿಲ್ಲಾ ಪಂಚಾಯತಿ | ಸದಸ್ಯರು |
| 9 | ನಿರ್ದೇಶಕರು(ಪಂರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಈ ಸಮಿತಿಯ ಉದ್ದೇಶವು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಜಿಲ್ಲಾ ಮಟ್ಟದಲ್ಲಿ ಪ್ರತಿ ತಾಲ್ಲೂಕಿಗೆ ಒಂದರಂತೆ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆಯಾಗಿರುವ ಗ್ರಾಮ ಪಂಚಾಯತಿಗಳನ್ನು ಪರಾಮರ್ಶಿಸಿ ಅಂತಿಮಗೊಳಿಸುವುದಾಗಿರುತ್ತದೆ.

(ಕೆ.ಯಾಲಕ್ಕಿಗೌಡ) 16/9/15
ನಿರ್ದೇಶಕರು(ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ನಿರ್ದೇಶಕರು(ಪಂರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
2. ನಿರ್ದೇಶಕರು(ಯೋಜನೆ, ಉಸ್ತುವಾರಿ ಮತ್ತು ಅನುಷ್ಠಾನ), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತುಮಕೂರು ಜಿಲ್ಲಾ ಪಂಚಾಯತಿ.
6. ಉಪ ಕಾರ್ಯದರ್ಶಿ(ಆ), ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ.
7. ಉಪ ಕಾರ್ಯದರ್ಶಿ(ಆ), ರಾಮನಗರ ಜಿಲ್ಲಾ ಪಂಚಾಯತಿ.

ಪ್ರತಿಯನ್ನು ಮಾಹಿತಿಗಾಗಿ:

1. ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.